ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: 3 ವಿಧಾನ ಪರಿಷತ್ತು

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE: 23/12/21

ಪರಿಷತ್ ಗಲಾಟೆ: ಸಭಾಪತಿಗೆ ಮಧ್ಯಂತರ ವರದಿ ಸಲ್ಲಿಕೆ

ಬೆಂಗಳೂರು: ಡಿ.15 ರಂದು ವಿಧಾನ ಪರಿಷತ್‌ನಲ್ಲಿ ನಡೆದ ಗಲಾಟೆ ಪ್ರಕರಣದ ಕುರಿತು ರಚಿಸಲಾಗಿದ್ದ ಸದನ ಸಮಿತಿ ಶುಕ್ರವಾರ ಸಭಾಪತಿ ಕೆ.ಪ್ರತಾಪ ಚಂದ್ರ ಶೆಟ್ಟಿ ಅವರಿಗೆ ಮಧ್ಯಂತರ ವರದಿ ಸಲ್ಲಿಕೆ ಮಾಡಿದೆ. ಅಂತಿಮ ವರದಿ ಸಲ್ಲಿಕೆಗೆ ಮೂರು ತಿಂಗಳ ಕಾಲವಕಾಶ ನೀಡಲಾಗಿದೆ. ಜೆಡಿಎಸ್ ಸದಸ್ಯ ಮರಿತಿಬ್ಬೇಗೌಡ ಅಧ್ಯಕ್ಷತೆಯ ಸಮಿತಿಯಲ್ಲಿ ಆರ್. ಬಿ. ತಿಮ್ಮಾಪುರ ಮತ್ತು ಬಿ.ಕೆ.ಹರಿಪ್ರಸಾದ್ ಸದಸ್ಯರಾಗಿದ್ದಾರೆ. ಸಮಿತಿ ಇಪ್ಪತ್ತು ದಿನಗಳಲ್ಲಿ ವರದಿ ನೀಡುವಂತೆ ಸಭಾಪತಿಗಳು ಸೂಚನೆ ನೀಡಿದ್ದರಿಂದ್ದಲೆಯಲ್ಲಿ 84 ಪುಟಗಳ ಮಧ್ಯಂತರ ವರದಿ ನೀಡಲಾಗಿದೆ. ಸಮಿತಿ ಐದು ಸಭೆಗಳನ್ನು ನಡೆಸಿದ್ದು, ಈ ಪ್ರಕರಣದಲ್ಲಿ ಖಾಸಗಿ ಮಾಧ್ಯಮಗಳ ರೆಕಾರ್ಡ್, ಪರಿಷತ್ ವೆಬ್ ಕಾಸ್ಟ್ ರೆಕಾರ್ಡ್, ಪರಿಷತ್ ಕಾರ್ಯದರ್ಶಿ, ಕಾಂಗ್ರೆಸ್ ಸದಸ್ಯ ಪಿ.ಆರ್. ರಮೇಶ್, ಮಾರ್ಷಲ್ ಆವರಿಗೆ ನೋಟಿಸ್ ನೀಡಿ ಅವರ ಅಭಿಪ್ರಾಯ ಪಡೆಯಲು ತೀರ್ಮಾನಿಸಲಾಗಿದೆ. ಉಪ ಸಭಾಪತಿಯಾಗಿದ್ದ ಧರ್ಮೇಗೌಡರ ಡತ್ ನೋಟ್ ಕೂಡ ಪರಿಶೀಲಿಸಲು ತೀರ್ಮಾನಿಸಲಾಗಿದೆ. ಇಂತಹ ಪ್ರಕರಣದಲ್ಲಿ ಬೇರೆ ರಾಜ್ಯಗಳು ಯಾವ ರೀತಿಯ ತೀರ್ಮಾನ ತೆಗೆದುಕೊಂಡಿದ್ದವು ಎನ್ನುವ ಬಗ್ಗೆ ಪರಿಶೀಲನೆ ನಡೆಸಲು ನಿರ್ಧರಿಸಲಾಗಿದೆ. ವರದಿ ಸ್ವೀಕರಿಸಿ ಮಾತನಾಡಿದ ಕೆ.ಪ್ರತಾಪಚಂದ್ರ ಶೆಟ್ಟಿ, ಏನು ಕ್ರಮ ವಹಿಸಬೇಕೆಂದು ಎನ್ನುವುದನ್ನು ಮುಂದಿನ ದಿನಗಳಲ್ಲಿ ತೀರ್ಮಾನ ಮಾಡುವುದಾಗಿ ಹೇಳಿದರು.